# ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ

ಜ್ಞಾನ ಸಾಗರ ಆವರಣ, ವಿನಾಯಕ ನಗರ, ಕಂಟೋನ್ಮೆಂಟ್, ಬಳ್ಳಾರಿ – 583105

**VIJAYANAGARA SRI KRISHNADEVARAYA UNIVERSITY**

"Jnana Sagara" Campus, Vinayaka Nagara, Contonment, Ballari - 583105

ಪ್ರೊ. ಶಶಿಕಾಂತ ಎಸ್. ಉಡಿಕೇರಿ
ಕುಲಸಚಿವರು (ಮೌಲ್ಯಮಾಪನ)

ದೂರವಾಣಿ : 08392-241011


ಸಂಖ್ಯೆ : ವಿಶ್ರೀಕೃವಿಬ/ಪರೀಕ್ಷಾ/ಬಿ.ಇಡಿ.-ಪ್ರಾ.ಪ.ಅ/2021-22/1656

ದಿನಾಂಕ : 29-01-2022

## ಪರೀಕ್ಷಾ ಅಧಿಸೂಚನೆ

ವಿಷಯ: ಫೆಬ್ರುವರಿ/ಮಾರ್ಚ್-2022 ರ ತಿಂಗಳನಲ್ಲಿ ಜರುಗಲಿರುವ ಬಿ.ಇಡಿ. ಪದವಿಯ 2 ಮತ್ತು 4ನೇ ಸೆಮಿಸ್ಟರ್ (Regular/Repeater) ಲಿಖಿತ/ಪ್ರಾಯೋಗಿಕ ಪರೀಕ್ಷೆಗಳಿಗೆ ಅರ್ಜಿ ಸಲ್ಲಿಸುವ ಹಾಗೂ ಶುಲ್ಕ ಪಾವತಿಸುವ ಕುರಿತು.

ಉಲ್ಲೇಖ:
1) UGC Guidelines on Examinations and Academic Calender in view of the COVID-19 Pandemic – July-2021.
2) ಕುಲಸಚಿವರು ( ಆಡಳಿತ ) ರವರ ಕಛೇರಿ ಪತ್ರ ಸಂಖ್ಯೆ : 1195, ದಿನಾಂಕ : 21-10-2021.
3) ಕುಲಸಚಿವರು ( ಆಡಳಿತ ) ರವರ ಕಛೇರಿ ಪತ್ರ ಸಂಖ್ಯೆ : 1414, ದಿನಾಂಕ : 10-11-2021.
4) ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ : 27-01-2022

****

ಮಾನ್ಯ ಕುಲಪತಿಗಳ ಅನುಮೋದನೆ ಮೇರೆಗೆ, ಉಲ್ಲೇಖ-3ರ ವಿಶ್ವವಿದ್ಯಾಲಯದ ಶೈಕ್ಷಣಿಕ ವೇಳಾಪಟ್ಟಿಯನ್ವಯ ಫೆಬ್ರುವರಿ/ಮಾರ್ಚ್-2022 ರ ತಿಂಗಳನಲ್ಲಿ ಜರುಗಲಿರುವ ಬಿ.ಇಡಿ 2 ಮತ್ತು 4ನೇ ಸೆಮಿಸ್ಟರ್ ( ರೆಗ್ಯುಲರ್ ಹಾಗೂ ರಿಪೀಟರ್ಸ್ ) ವಿದ್ಯಾರ್ಥಿಗಳ ಲಿಖಿತ/ಪ್ರಾಯೋಗಿಕ ಪರೀಕ್ಷೆಗಳಿಗೆ ಅರ್ಜಿ ಸಲ್ಲಿಸುವ ಹಾಗೂ ಪರೀಕ್ಷಾ ಶುಲ್ಕ ಪಾವತಿಸುವ ದಿನಾಂಕಗಳು ಈ ಕೆಳಗಿನಂತಿವೆ.

ಪರೀಕ್ಷೆ ತೆಗೆದುಕೊಳ್ಳಲು ನಿಯಮಾನುಸಾರ ಅರ್ಹರಾದ ಅಭ್ಯರ್ಥಿಗಳು ತಮ್ಮ ಅರ್ಜಿಯನ್ನು ಮತ್ತು ಪರೀಕ್ಷಾ ಶುಲ್ಕವನ್ನು ಆನ್‌ಲೈನ್ ಮೂಲಕ ಮಾತ್ರ ಪಾವತಿಸಲು ಅವಕಾಶವಿರುತ್ತದೆ. ವಿಶ್ವವಿದ್ಯಾಲಯವು ನೇರವಾಗಿ ಅರ್ಜಿಗಳನ್ನು ತೆಗುದುಕೊಳ್ಳುವುದಿಲ್ಲ.

### ಅರ್ಜಿ (ಶುಲ್ಕ ಪಾವತಿಸಲು) ಸಲ್ಲಿಸಲು ನಿಗದಿಪಡಿಸಿದ ದಿನಾಂಕಗಳು

| ಕ್ರ.ಸಂ. | ವಿವರ | ದಿನಾಂಕಗಳು |
|---|---|---|
| 1. | ದಂಡ ಶುಲ್ಕ ರಹಿತ | 31-01-2022 ರಿಂದ 06-02-2022 ರವರೆಗೆ |
| 2. | ದಂಡ ಶುಲ್ಕ ಪ್ರತಿ ದಿನಕ್ಕೆ ರೂ. 100/- ರಂತೆ | 07-02-2022 ರಿಂದ 10-02-2022 ರವರೆಗೆ |
| 3. | ದಂಡ ಶುಲ್ಕ ಪ್ರತಿ ದಿನಕ್ಕೆ ರೂ. 500/- ರಂತೆ | 11-02-2022 ರಿಂದ 14-02-2022 ರವರೆಗೆ |

### : ಪರೀಕ್ಷಾ ಶುಲ್ಕದ ವಿವರಗಳು :

| ಕ್ರ..ಸಂ. | ವಿವರಣೆ | ಶುಲ್ಕ |
|---|---|---|
| 1. | ಬಿ.ಇಡಿ. 2 ಮತ್ತು 4ನೇ ಸೆಮಿಸ್ಟರ್ (ರೆಗ್ಯೂಲರ್/ರಿಪೀಟರ್ಸ್) | ರೂ. 1300.00 |
| 2. | ಅಂಕಪಟ್ಟಿ ಶುಲ್ಕ | ರೂ. 150.00 |
| 3. | ಉತ್ತೀರ್ಣತಾ ಪ್ರಮಾಣ ಪತ್ರ (ಅಂತಿಮ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ಮಾತ್ರ) | ರೂ. 150.00 |
| ಪರೀಕ್ಷೆಗಳ ಪುನರಾವರ್ತಿತ ವಿದ್ಯಾರ್ಥಿಗಳು ಪೂರ್ಣ ಶುಲ್ಕವನ್ನು ಪಾವತಿಸಬೇಕು. | | |

### : ಎಲ್ಲಾ ಪ್ರಾಂಶುಪಾಲರುಗಳು ಹಾಗೂ ವಿದ್ಯಾರ್ಥಿಗಳಿಗೆ ಸೂಚನೆ :

1. ವಿದ್ಯಾರ್ಥಿಗಳು ಆನ್ ಲೈನ್ (Online) ಮುಖಾಂತರ ಅರ್ಜಿ ಸಲ್ಲಿಸಲು www.vskub.ac.in >>> EXAMINATION >>> Application Portal ನಲ್ಲಿ ನೋಂದಣಿ ಸಂಖ್ಯೆ ನಮೂದಿಸಿ ಪರೀಕ್ಷೆ ತೆಗೆದುಕೊಳ್ಳುವ ಸೆಮಿಸ್ಟರ್‌ವಾರು/ವಿಷಯವಾರು ಗುರುತು ಮಾಡಿ, ಶುಲ್ಕದ ವಿವರಗಳುಳ್ಳ ಅರ್ಜಿ ಮುದ್ರಿಸಿ, ಶುಲ್ಕ ಭರಿಸಿದ ನಂತರ ಪ್ರತಿಯನ್ನು ತಕ್ಷಣ ವಿದ್ಯಾರ್ಥಿಗಳು ಮಹಾವಿದ್ಯಾಲಯಗಳಲ್ಲಿ ಸಲ್ಲಿಸಬೇಕು.

2. SC/ST ಹಾಗೂ OBC ಅಭ್ಯರ್ಥಿಗಳು (ಸರ್ಕಾರಿ ಆದೇಶಗಳನ್ವಯ ವಾರ್ಷಿಕ ಆದಾಯದ ಮಿತಿಯೊಳಗೆ ಬರುವ ಅಭ್ಯರ್ಥಿಗಳು) ಪ್ರವರ್ಗ-1, 2ಎ, 2ಬಿ, 3ಎ, 3ಬಿ ವಿದ್ಯಾರ್ಥಿಗಳು ವಿನಾಯಿತಿ ಶುಲ್ಕವನ್ನು ಹಾಗೂ ಇತರೆ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ಈ ಬಗ್ಗೆ ಎಲ್ಲಾ ಸಂಬಂಧಪಟ್ಟ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳು SC/ST ಹಾಗೂ OBC ವಿದ್ಯಾರ್ಥಿಗಳ ಆದಾಯ ವಿನಾಯಿತಿಯನ್ನು

ಪರಿಗಣಿಸುವ ಮುನ್ನ ಆದಾಯ ಮಿತಿಗೆ ಸಂಬಂಧಪಟ್ಟ ಎಲ್ಲಾ ದಾಖಲಾತಿಗಳನ್ನು ಸೂಕ್ತವಾಗಿ ಪರಿಶೀಲಿಸಿ ಆದಾಯ ಮಿತಿಗೆ ಒಳಪಡುವ ವಿದ್ಯಾರ್ಥಿಗಳ ಮಾಹಿತಿಯನ್ನು ಜಾಲತಾಣದಲ್ಲಿ ದೃಢೀಕರಿಸಲು ತಿಳಿಸಲಾಗಿದೆ.

3. ಮಹಾವಿದ್ಯಾಲಯಗಳಿಂದ ದೃಢೀಕರಣ ಮತ್ತು ಅನುಮೋದನೆ ಪಡೆದಿರುವ ವಿದ್ಯಾರ್ಥಿಗಳಿಗೆ ಮಾತ್ರ ಶುಲ್ಕ ವಿನಾಯಿತಿ ಪರವಾನಿಗೆ ಇರುತ್ತದೆ.
4. SC/ST ಹಾಗೂ OBC ಅಭ್ಯರ್ಥಿಗಳು (ಸರ್ಕಾರಿ ಆದೇಶಗಳನ್ವಯ ವಾರ್ಷಿಕ ಆದಾಯದ ಮಿತಿಯೊಳಗೆ ಬರುವ ಅಭ್ಯರ್ಥಿಗಳು) ರೆಗ್ಯೂಲರ್ (Freshers) ವಿದ್ಯಾರ್ಥಿಗಳು ಅಂಕಪಟ್ಟಿ ಶುಲ್ಕ ರೂ. 150/-ನ್ನು ಮಾತ್ರ ಪಾವತಿಸಬೇಕು. ಆದರೆ ಸದರಿ ವರ್ಗದ ಪುನರಾವರ್ತಿತ (Repeater) ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ ಇರುವುದಿಲ್ಲ. ಅವರುಗಳು ಪೂರ್ಣ ಶುಲ್ಕ ಭರಿಸಬೇಕು.
5. ಸರ್ಕಾರ ನಿಗದಿಪಡಿಸಿದ ಆದಾಯದ ಮಿತಿಯೊಳಗಿರುವ SC/ST ಹಾಗೂ ಇನ್ನುಳಿದ OBC/LIG ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಸರ್ಕಾರದಿಂದ ಮಂಜೂರಾತಿ ಪಡೆದ ನಂತರ ಆಯಾ ಮಹಾವಿದ್ಯಾಲಯದ ಪ್ರಾಂಶುಪಾಲರು ವಿಶ್ವವಿದ್ಯಾಲಯಕ್ಕೆ ಸಲ್ಲಿಸತಕ್ಕದ್ದು.
6. ಸರ್ಕಾರ ನಿಗದಿಪಡಿಸಿದ ಆದಾಯದ ಮಿತಿಯೊಳಗಿರುವ ಶುಲ್ಕ ವಿನಾಯಿತಿ ಪಡೆದಿರುವ ಹಾಗೂ ಇನ್ನುಳಿದ ವಿದ್ಯಾರ್ಥಿಗಳ ವ್ಯತ್ಯಾಸ ಪರೀಕ್ಷಾ ಶುಲ್ಕವನ್ನು ಸರ್ಕಾರದಿಂದ ಮಂಜೂರಾತಿ ಪಡೆದ ನಂತರ ಆಯಾ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳು ವಿಶ್ವವಿದ್ಯಾಲಯಕ್ಕೆ ಸಲ್ಲಿಸತಕ್ಕದ್ದು. ಶುಲ್ಕ ವಿನಾಯಿತಿ ಮೊತ್ತವನ್ನು ಪಾವತಿಸುವಲ್ಲಿ ತಪ್ಪಿದ್ದಲ್ಲಿ ವಿಶ್ವವಿದ್ಯಾಲಯವು ಕೈಗೊಳ್ಳುವ ಕ್ರಮಕ್ಕೆ ಬದ್ಧರಾಗಿರತಕ್ಕದ್ದು.
7. ಪರೀಕ್ಷೆ ತೆಗೆದುಕೊಳ್ಳುವ ಪುನರಾವರ್ತಿತ (Repeaters) ವಿದ್ಯಾರ್ಥಿಗಳ ಸೆಮಿಸ್ಟರ್‌ವಾರು ಪ್ರತ್ಯೇಕವಾಗಿ ಶುಲ್ಕವನ್ನು ಪಾವತಿಸತಕ್ಕದ್ದು.
8. ಅರ್ಜಿ ಸಲ್ಲಿಸುವ ಅಭ್ಯರ್ಥಿಯು ತನ್ನ ನೋಂದಣಿ ಸಂಖ್ಯೆಯನ್ನು ಬಿಟ್ಟು ಬೇರೆ ನೋಂದಣಿ ಸಂಖ್ಯೆ ಅಥವಾ ಬೇರೆ ವಿಷಯಗಳನ್ನು ನಮೂದಿಸಿದರೆ ಅಂತಹ ಪ್ರಕರಣಗಳನ್ನು ವಿಶ್ವವಿದ್ಯಾಲಯವು ಸರಿಪಡಿಸಲಾಗುವುದಿಲ್ಲ.
9. ಪರೀಕ್ಷಾ ಶುಲ್ಕವನ್ನು ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕಗಳನ್ನು ಯಾವುದೇ ಕಾರಣಕ್ಕೂ ವಿಸ್ತರಿಸಲಾಗುವುದಿಲ್ಲ ಮತ್ತು ಕೊನೆಯ ದಿನಾಂಕದ ನಂತರ ಬಂದಿರುವ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ.
10. ಪರೀಕ್ಷಾ ಶುಲ್ಕ ವಿನಾಯಿತಿ ಪಡೆದ ವಿದ್ಯಾರ್ಥಿಗಳ ಪಟ್ಟಿಯನ್ನು ಸಂಬಂಧಿಸಿದ ಮಹಾವಿದ್ಯಾಲಯದ ಪ್ರಾಂಶುಪಾಲರುಗಳು ದೃಢೀಕರಿಸಿ ಪ್ರತ್ಯೇಕವಾಗಿ ಪರೀಕ್ಷಾ ವಿಭಾಗಕ್ಕೆ : 18-02-2022ರ ಒಳಗಾಗಿ ಸಲ್ಲಿಸತಕ್ಕದ್ದು. ಈ ವಿವರ ಸಲ್ಲಿಸಿದ ಮಹಾವಿದ್ಯಾಲಯಗಳ ಪರೀಕ್ಷಾರ್ಥಿಗಳಿಗೆ ಮಾತ್ರ ಪ್ರವೇಶ ಪತ್ರ ನೀಡಲಾಗುವುದು. ಈ ಕಾರಣದಿಂದ ಯಾವುದೇ ಮಹಾವಿದ್ಯಾಲಯಗಳಿಗೆ/ವಿದ್ಯಾರ್ಥಿಗಳಿಗೆ ತೊಂದರೆ ಆದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರುಗಳೇ ಜವಾಬ್ದಾರರಾಗಿರುತ್ತಾರೆ.
11. ಆಂತರಿಕ ಅಂಕಗಳನ್ನು ಸೆಮಿಸ್ಟರ್ ಕೆಲಸದ ಅಂತಿಮ ದಿನಗಳ ನಂತರದ ಹತ್ತು ದಿನಗಳ ಅಂತರದಲ್ಲಿ ಆಂತರಿಕ ಅಂಕಗಳ ಪಟ್ಟಿಯನ್ನು ವಿಶ್ವವಿದ್ಯಾಲಯಕ್ಕೆ ಸಲ್ಲಿಸತಕ್ಕದ್ದು ಹಾಗೂ ನಂತರ ಬಂದ ಆಂತರಿಕ ಅಂಕಪಟ್ಟಿಗಳನ್ನು ಯಾವುದೇ ಕಾರಣಕ್ಕೆ ಸ್ವೀಕರಿಸಲಾಗುವುದಿಲ್ಲ.

29.1.2022

**ಕುಲಸಚಿವರು (ಮೌಲ್ಯಮಾಪನ)**
**ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ,**
**ಬಳ್ಳಾರಿ**

**ಗೆ,**

**ಎಲ್ಲಾ ಬಿ.ಇಡಿ.ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳಿಗೆ,**

**ಪ್ರತಿಗಳು :**

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ. ರವರ ಮಾಹಿತಿಗಾಗಿ
2. ಕುಲಸಚಿವರ ಆಪ್ತ ಸಹಾಯಕರು, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ. ರವರ ಮಾಹಿತಿಗಾಗಿ
3. ಹಣಕಾಸು ಅಧಿಕಾರಿಗಳು, ವಿಶ್ರೀಕೃ ವಿಶ್ವವಿದ್ಯಾಲಯ, ಬಳ್ಳಾರಿ. ರವರ ಮಾಹಿತಿಗಾಗಿ
4. ಮೇ// ಲಾಜಿಸಿಸ್, ಬೆಂಗಳೂರು, ಶಾಖೆ ವಿ.ಶ್ರೀ.ಕೃ. ವಿಶ್ವವಿದ್ಯಾಲಯ ಆವರಣ, ಬಳ್ಳಾರಿ.
5. ಕಛೇರಿ ಪ್ರತಿ.